ಕುಮಟಾ ಕ್ಷೇತ್ರದಲ್ಲಿ ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ

158 (347) ಶ್ರೀ ಮೋಹನ್ ಕೆ ಶೆಟ್ಟಿ (ಕುಮಟಾ) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕುಮಟಾ ವಿಧಾನಸಭಾ ಕ್ಷೇತ್ರಕ್ಕೆ ನಾಗರಿಕರಿಗೆ ಅತ್ಯಾವಶ್ಯಕವಾದ ಆರೋಗ್ಯ ಸೇವೆ ಒದಗಿಸಲು ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿಗೆ ಹಲವಾರು ಬಾರಿ ಬೇಡಿಕೆ ಸಲ್ಲಿಸಿದರೂ ಕೂಡ ಒಂದು ಹೊಸ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಾತಿ ನೀಡದಿರಲು ಕಾರಣಗಳೇನು, ಈ ಬೇಡಿಕೆ ಕುರಿತು ಕ್ರಮ ಕೈಗೊಳ್ಳಲಾಗುವುದೇ

ಆ) ಕುಮಟಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರ ಮಂಜೂರಿ ಕುರಿತು ಸರ್ಕಾರವು ಮನಗಂಡಿದೆಯೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಈಗಾಗಲೇ ಈ ವಿಧಾನಸಭಾ ಕ್ಷೇತ್ರದಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ಆದ್ದರಿಂದ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಪನೆಗೆ ಅವಕಾಶವಿರುವುದಿಲ್ಲ

ಆ) ಹೊಸದಾಗಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿರುವುದಿಲ್ಲವಾದ್ದರಿಂದ ಮಂಜೂರಾತಿ ಪ್ರಶ್ನೆ ಬರುವುದಿಲ್ಲ

ಅನುದಾನರಹಿತ ಖಾಸಗಿ ಶಾಲೆಗಳಿಗೆ ಅನುದಾನ ನೀಡುವುದು

159 (349) ಶ್ರೀ ಮೋಹನ್ ಕೆ ಶೆಟ್ಟಿ (ಕುಮಟ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) 1992 ರ ಪೂರ್ವದಲ್ಲಿ ಶಾಶ್ವತ ಅನುದಾನ ರಹಿತವಾಗಿ ಅನುಮತಿ ನೀಡಿದ ಖಾಸಗಿ ಪ್ರಾಥಮಿಕ ಶಾಲೆ ಪ್ರೌಢಶಾಲೆಗಳು ಈಗಿನ ಪರಿಸ್ಥಿತಿಯಲ್ಲಿ ಅನುದಾನ ರಹಿತವಾಗಿ ನಡೆಸಿಕೊಂಡು ಹೋಗುವುದು ತೀರಾ ಕಷ್ಟಕರವಾಗಿರುವುದರಿಂದ ಸರ್ಕಾರ ಅನುದಾನ ನೀಡಲು ಮನಗಂಡಿದೆಯೆ

ಆ) ಅನುದಾನ ನೀಡಲು ಮನಗಂಡಿದ್ದರೆ ಯಾವಾಗ ಅನುದಾನ ನೀಡಲಾಗುವುದು?

ಪ್ರೋ।। ಬಿ ಕೆ ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಜಾರಿಯಲ್ಲಿರುವ ಅನುದಾನ ನೀತಿರನ್ವಯ ದಿ 01 06 1987 ಹಾಗೂ ನಂತರ ಪ್ರಾರಂಭಿಸಲಾದ ಶಿಕ್ಷಣ ಸಂಸ್ಥೆಗಳು ಶಾಶ್ವತ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಾಗಿರುತ್ತವೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳಿಗೆ ಸೇರಿದ ಸಂಸ್ಥೆಗಳ ವತಿಯಿಂದ ಪ್ರಾರಂಭಿಸಿದ ಶಾಲೆಗಳಿಗೆ ಸಂಬಂಧಿಸಿದಂತೆ ವೇತನಾನುದಾನಕ್ಕೆ ಒಳಪಡಿಸಲು ಪರಿಗಣಿಸಲು ದಿ 31 03 1992 ಕಟ್ ಆಫ್ ದಿನಾಂಕವಾಗಿದೆ ಇದು ಸರ್ಕಾರದ ನೀತಿಯಾಗಿದೆ ಇದಕ್ಕೆ ಒಳಪಡಿಸದೇ ಇರುವ ಸಂಸ್ಥೆಗಳಿಗೆ ವೇತನಾನುದಾನ ನೀಡಲು ಆಸ್ಪದ ಇಲ್ಲ

ಆ) ಉದ್ಭವಿಸುವುದಿಲ್ಲ

ಶಿಕ್ಷಕರ ವರ್ಗಾವಣೆ ಅಧಿಕಾರ

160 (79) ಶ್ರೀ ನಾಯಕ್ ಜೆ ಡಿ (ಭಟ್ಕಳ) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?